# ಸಮಾಜ ಕಲ್ಯಾಣ ಇಲಾಖೆ

# SOCIAL WELFARE DEPARTMENT

ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ

(ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ)

ಅಧಿನಿಯಮ, 2013 ಮತ್ತು ನಿಯಮಗಳು, 2017

**THE KARNATAKA SCHEDULED CASTES SUB-ALLOCATION AND TRIBAL SUB-ALLOCATION (PLANNING, ALLOCATION AND UTILIZATION OF FINANCIAL RESOURCES) ACT, 2013 AND RULES, 2017**

# ಪರಿವಿಡಿ


| ಕ್ರ. ಸಂ. | ವಿಷಯ | ಪುಟ ಸಂಖ್ಯೆ |
|---|---|---|
| 1 | ಕರ್ನಾಟಕ ಅನುಸೂಚಿತ ಜಾತಿಗಳ ಉಪ ಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಅಧಿನಿಯಮ, 2013ರ ಅಧಿಸೂಚನೆ | 1 |
| 2 | ಕರ್ನಾಟಕ ಅನುಸೂಚಿತ ಜಾತಿಗಳ ಉಪ ಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಅಧಿನಿಯಮ, 2013 | 2–14 |
| 3 | ತಿದ್ದುಪಡಿ ಅಧಿನಿಯಮ ದಿನಾಂಕ: 17.07.2017 | 15–17 |
| 4 | ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ ನಿಯಮಗಳು, 2017 | 18–49 |
| 5 | The Karnataka Scheduled Castes Sub-Allocation and Tribal Sub-Allocation (Planning, Allocation and Utilization of Financial Resources) Act, 2013 | 50–61 |
| 6 | The Karnataka Scheduled Castes Sub-Allocation and Tribal Sub-Allocation (Planning, Allocation and Utilization of Financial Resources) (Amendment) Act, 2017 | 62–64 |
| 7 | The Karnataka Scheduled Castes Sub-Allocation and Tribal Sub-Allocation (Planning, Allocation and Utilization of Financial Resources) Rules, 2017 | 65–93 |
| 8 | Proceedings of Government of Karnataka dated 29.01.2016 | 94–95 |

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಕಇ 75 ಎಸ್‌ಎಲ್‌ಪಿ 2014

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 20–03–2014

**ಅಧಿಸೂಚನೆ**

ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ, 2013 (2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 65)ರ 1ನೇ ಪ್ರಕರಣ (2)ನೇ ಉಪ–ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಸದರಿ ಅಧಿನಿಯಮವು ದಿನಾಂಕ: 20–03–2014 ರಿಂದ ಜಾರಿಗೆ ಬರತಕ್ಕದೆಂದು ಗೊತ್ತುಪಡಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**ಎನ್. ನರಸಿಂಹಮೂರ್ತಿ**
ಸರ್ಕಾರದ ಅಧೀನ ಕಾರ್ಯದರ್ಶಿ–1
ಸಮಾಜ ಕಲ್ಯಾಣ ಇಲಾಖೆ

# ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ, 2013

(2013ರ ಡಿಸೆಂಬರ್ ತಿಂಗಳ ಇಪ್ಪತ್ತಾರನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ಜನಸಂಖ್ಯೆಯ ಪ್ರಮಾಣಕ್ಕನುಸಾರವಾಗಿ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆಗೆ ರಾಜ್ಯ ಯೋಜನಾ ವೆಚ್ಚದ ಒಂದು ಭಾಗವನ್ನು ಮೀಸಲಿಡುವುದಕ್ಕಾಗಿ ಮತ್ತು ಉಪಯೋಜನೆಯ ತಯಾರಿಕೆ, ಅನುಷ್ಠಾನ ಮತ್ತು ಮೇಲ್ವಿಚಾರಣೆ ಮಾಡಲು ಸಾಂಸ್ಥಿಕ ವ್ಯವಸ್ಥೆಯನ್ನು ಸಜ್ಜುಗೊಳಿಸಲು ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗೆ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ಜನಸಂಖ್ಯೆಯ ಪ್ರಮಾಣಕ್ಕೆ ಅನುಸಾರವಾಗಿ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆಗೆ ರಾಜ್ಯ ಯೋಜನಾ ವೆಚ್ಚದ ಒಂದು ಭಾಗವನ್ನು ಮೀಸಲಿಡುವುದಕ್ಕಾಗಿ ಹಾಗೂ ಉಪಯೋಜನೆಯ ತಯಾರಿಕೆ, ಅನುಷ್ಠಾನ ಮತ್ತು ಮೇಲ್ವಿಚಾರಣೆ ಮಾಡಲು ಸಾಂಸ್ಥಿಕ ವ್ಯವಸ್ಥೆಯನ್ನು ಸಜ್ಜುಗೊಳಿಸಲು ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗೆ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು, ಎಂದರೆ:-

## ಅಧ್ಯಾಯ - I

## ಪ್ರಾರಂಭಿಕ

**1. ಚಿಕ್ಕ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಕರ್ನಾಟಕ ರಾಜ್ಯಪತ್ರದಲ್ಲಿ ನಿಯಮಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು ಮತ್ತು ಈ ಅಧಿನಿಯಮದ ಬೇರೆ ಬೇರೆ ಉಪಬಂಧಗಳ ಜಾರಿಗೆ ಬೇರೆ ಬೇರೆ ದಿನಾಂಕಗಳನ್ನು ಗೊತ್ತುಪಡಿಸಬಹುದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) **"ಇಲಾಖೆ"** ಎಂದರೆ, ಯಾವ ಇಲಾಖೆಗೆ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ಕ್ಷೇಮಾಭಿವೃದ್ಧಿಗೆ ಯೋಜನಾ ಸ್ಕೀಮುಗಳನ್ನು ಅನುಷ್ಠಾನಗೊಳಿಸುವ ಕಾರ್ಯವನ್ನು ವಹಿಸಲಾಗಿದೆಯೋ ಆ ಸರ್ಕಾರಿ ಇಲಾಖೆ;